# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1615 |
| ಸದಸ್ಯರ ಹೆಸರು | : | ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11-03-2022 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು ಯಾವಾಗ ಸ್ಥಾಪಿಸಲಾಗಿದೆ; ಇದರ ಉದ್ದೇಶವೇನು; | ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 12 ಶಾಸನ 2016, ದಿನಾಂಕ:26-07-2016ರಂತೆ 2016ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು ಗದಗದಲ್ಲಿ ಈ ಕೆಳಗಿನ ಉದ್ದೇಶಕ್ಕಾಗಿ ಪ್ರಾರಂಭಿಸಲಾಗಿದೆ;<br>• ವಿಶ್ವವಿದ್ಯಾಲಯದ ದೃಷ್ಠಿಯು ಸುಸ್ಥಿರ ಗ್ರಾಮೀಣಾಭಿವೃದ್ಧಿ ಹಾಗೂ ಗ್ರಾಮೀಣ ಜನತೆಯ ಜೀವನ ಗುಣಮಟ್ಟವನ್ನು ವಿಶಾಲ ಹರವಿನ ಸುಧಾರಣೆಯನ್ನು ಖಚಿತಪಡಿಸುವ ಗ್ರಾಮೀಣಾಭಿವೃದ್ಧಿ ಪ್ರಕ್ರಿಯೆಯಲ್ಲಿ ಭಾಗಿಯಾಗುವಂತಹ ಸಮರ್ಪಣಾ ಮನೋಭಾವದ ಬದ್ಧತೆಯುಳ್ಳ, ಮಾನವ ಸಂಪನ್ಮೂಲವನ್ನು ಸೃಜಿಸುವ ಮೂಲಕ ಗ್ರಾಮೀಣ ಸಮಾಜವನ್ನು ಉತ್ಕೃಷ್ಟ ಕೇಂದ್ರವಾಗಿಸಲು ಕಾರ್ಯಮಗ್ನವಾಗುವುದು.<br>• ವಿಶ್ವವಿದ್ಯಾಲಯದ ಗುರಿಯು ಬಡತನವನ್ನು ಕಡಿಮೆ ಮಾಡಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಿ ಜನರು ತಮ್ಮದೇ ಆದ ಕ್ಷೇಮಾಭಿವೃದ್ಧಿ, ಆರ್ಥಿಕ ಮತ್ತು ಸಮಾಜೋ-ರಾಜಕೀಯ ಪ್ರಗತಿಗೆ ನಿರ್ಧಾರಗಳನ್ನು ತೆಗೆದುಕೊಳ್ಳುವಂತಹ ಪಂಚಾಯತ್ ರಾಜ್ ಸಂಸ್ಥೆಗಳ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಕ ಅಂತರ್ಗತ ಬೆಳವಣಿಗೆಗೆ ಕಾರಣವಾಗುವ ಆರೋಗ್ಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿಗಳಲ್ಲಿ ಅಗತ್ಯ ಸೇವೆಗಳನ್ನು ನೀಡಲು ಅವಕಾಶಪೀಯುವ ತ್ವರಿತ ಆರ್ಥಿಕ ಬೆಳವಣಿಗೆ ಮತ್ತು ಸುಸ್ಥಿರ ಅಭಿವೃದ್ಧಿಗಾಗಿ ವಿವಿಧ ಪಾಲುದಾರರಿಗೆ ಶಿಕ್ಷಣ ಮತ್ತು ತರಬೇತಿ ನೀಡುವುದು. |

| | | |
|---|---|---|
| (ಆ) | ಈ ವಿಶ್ವವಿದ್ಯಾಲಯದಿಂದ ಎಂ.ಎ. ಆರ್.ಡಿ.ಪಿ.ಆರ್ ಪದವಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ವಿಶ್ವವಿದ್ಯಾಲಯ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೂ ಎಂ.ಎ. ಆರ್.ಡಿ.ಪಿ.ಆರ್ ಪದವಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ:70 ಆಗಿರುತ್ತದೆ. |
| (ಇ) | ಈ ವಿದ್ಯಾರ್ಥಿಗಳಿಗೆ ಇಲಾಖಾ ನೇಮಕಾತಿಯಲ್ಲಿ ಅವಕಾಶ ಕಲ್ಪಿಸಲಾಗಿದೆಯೇ; | ವಿಶ್ವವಿದ್ಯಾಲಯದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳಿಗೆ ಆರ್.ಡಿ.ಪಿ.ಆರ್ ಇಲಾಖೆಯಲ್ಲಿ ಜರುಗುವ ನೇಮಕಾತಿಗಳಲ್ಲಿ ಪ್ರಾತಿನಿಧ್ಯ ನೀಡುವ ಕುರಿತು ಪರಿಶೀಲಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 293 ಜಿಪಸ 2021, ದಿನಾಂಕ: 04-10-2021ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. |
| (ಈ) | ಈ ಪದವಿ ಪಡೆದ ವಿದ್ಯಾರ್ಥಿಗಳಿಗೆ ಆರ್.ಡಿ.ಪಿ.ಆರ್ ನೇಮಕಾತಿಯಲ್ಲಿ ಮೀಸಲಾತಿ ನೀಡಿ ಅವಕಾಶ ಮಾಡಿಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು) | ಉನ್ನತ ಮಟ್ಟದ ಸಮಿತಿಯು ದಿನಾಂಕ:17-02-2022ರಂದು ಸಭೆ ನಡೆಸಿರುತ್ತದೆ. ಸದರಿ ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |

**ಸಂಖ್ಯೆ: ಗ್ರಾಅಪಂರಾ 118 ಜಿಪಸ 2022**

(ಕೆ.ಎಸ್ ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.